**Akashvani : Bangalore**
**Regional Bulletin In Kannada**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**11.09.2026 / 18.40 hrs**
**<><*<>*<>*><>**

ಮುಖ್ಯಾಂಶಗಳು

೧. **ನವೆಂಬರ್ ೧ ರೊಳಗೆ ಅಕ್ರಮ ಬಂದೂಕುಗಳನ್ನು ಸರ್ಕಾರಕ್ಕೆ ಒಪ್ಪಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೂಚನೆ**

೨. **ಕಸ್ತೂರಿ ರಂಗನ್ ವರದಿ ಜಾರಿಗೆ ವಿರೋಧ; ಶಿವಮೊಗ್ಗ, ಕೊಡಗಿನಲ್ಲಿ ಪ್ರತಿಭಟನೆ**

೩. **ಕಾವೇರಿ ಜಲ ವಿವಾದ; ಸೋಮವಾರ ಸುಪ್ರೀಂಕೋರ್ಟ್‌ನಲ್ಲಿ ರಾಜ್ಯದ ಅರ್ಜಿ ವಿಚಾರಣೆ**

೪. **ನವದೆಹಲಿಯಲ್ಲಿ ರಾಹುಲ್ ಗಾಂಧಿ ಭೇಟಿಯಾದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ; ಶೀಘ್ರವೇ ಸಚಿವ ಸಂಪುಟ ಭರ್ತಿ ಮಾಡುವಂತೆ ಮನವಿ**

೫. **ಬೆಂಗಳೂರಿನಲ್ಲಿ ರಸ್ತೆ ಗುಂಡಿ ಮುಚ್ಚಲು ಪ್ರಾಯೋಗಿಕವಾಗಿ ಜೆಟ್ ಪ್ಯಾಚರ್ ಯಂತ್ರ ಬಳಕೆ**

**<><*<>*<>*><>**

ನವೆಂಬರ್ ೧ ರೊಳಗೆ ಪರವಾನಗಿ ಇಲ್ಲದ ಅಕ್ರಮ ಬಂದೂಕು ಹಾಗೂ ಶಸ್ತ್ರಾಸ್ತ್ರಗಳನ್ನು ಸರ್ಕಾರಕ್ಕೆ ಒಪ್ಪಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಇಲ್ಲವಾದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಭಾಗವಹಿಸಿ, ಮಾತನಾಡಿದ ಅವರು, ಅರಣ್ಯ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳ ಭತ್ಯೆ ಕುರಿತಂತೆ ಆರ್ಥಿಕ ಇಲಾಖೆಯ ಬಳಿ ಚರ್ಚೆ ನಡೆಸಿ, ತೀರ್ಮಾನ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಅರಣ್ಯ ಅಧಿಕಾರಿಗಳು, ತೇಗದ ಸಿರಿ ಯೋಜನೆ ಯಶಸ್ಸಿಗೆ ಶ್ರಮಿಸುವಂತೆ ಕರೆ ನೀಡಿದ್ದಾರೆ. ಇದರಿಂದ ರೈತರಿಗೆ ಹೆಚ್ಚಿನ ಲಾಭವಾಗಲಿದೆ. ಜೊತೆಗೆ ಅರಣ್ಯ ಇಲಾಖೆಯ ಆದಾಯವನ್ನು ಹೆಚ್ಚಿಸುವ ಬಗ್ಗೆ ಎಲ್ಲರೂ ಗಮನ ಹರಿಸುವಂತೆ ತಿಳಿಸಿದ್ದಾರೆ.

**<><*<>*<>*><>**

ಕಸ್ತೂರಿ ರಂಗನ್ ವರದಿ ವಿರೋಧಿಸಿ, ಶಿವಮೊಗ್ಗದಲ್ಲಿ ಈಸೂರಿನಿಂದ ಶಿಕಾರಿಪುರದ ವರೆಗೆ ಕಾಂಗ್ರೆಸ್ ಪಾದಯಾತ್ರೆ ನಡೆಸಿತು. ಪಾದಯಾತ್ರೆಯಲ್ಲಿ ರೈತರು, ಕೃಷಿ ಕಾರ್ಮಿಕರು, ಸಾರ್ವಜನಿಕರು ಭಾಗವಹಿಸಿದ್ದರು. ಸಚಿವ ಮಧು ಬಂಗಾರಪ್ಪ ಮಾತನಾಡಿ, ಯಾವುದೇ ಕಾರಣಕ್ಕೂ ವರದಿ ಜಾರಿಗೆ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ. ಕೇಂದ್ರ ಸರ್ಕಾರ ೭ನೇ ಬಾರಿ ಕರಡು ಅಧಿಸೂಚನೆ ಹೊರಡಿಸಿರುವುದನ್ನು ಖಂಡಿಸಿದ ಅವರು, ವರದಿ ಜಾರಿ ವಿಚಾರದಲ್ಲಿ ಕೇಂದ್ರ ಸರ್ಕಾರಕ್ಕೆ ಹಠವೇಕೆ ಎಂದು ಪ್ರಶ್ನಿಸಿದ್ದಾರೆ. ಬಿಜೆಪಿ ಶಾಸಕರು, ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಜನರನ್ನು ದಿಕ್ಕು ತಪ್ಪಿಸುವ ಹೇಳಿಕೆ ನೀಡುತ್ತಿದ್ದು, ಸಂಸತ್ತಿನಲ್ಲಿಯೂ ಪ್ರಸ್ತಾಪಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇನ್ನೊಂದೆಡೆ ಕೊಡಗಿನಲ್ಲಿಯೂ ಕಸ್ತೂರಿ ರಂಗನ್ ವರದಿ ವಿರೋಧಿಸಿ, ಪ್ರತಿಭಟನಾ ಸಮಾವೇಶ ನಡೆಯಿತು. ಸುಮಾರು ಎರಡೂವರೆ ಗಂಟೆಗಳ ಕಾಲ ಮುಖ್ಯ ಹೆದ್ದಾರಿಯಲ್ಲಿ ಬಂದ್ ಮಾಡಿ, ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಸಕ ಮಂತರ್ ಗೌಡ ಮಾತನಾಡಿ, ಯಾವುದೇ ಕಾರಣಕ್ಕೂ ಕಸ್ತೂರಿ ರಂಗನ್ ವರದಿ ಜಾರಿಗೊಳಿಸಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

**<><*<>*<>*><>**

ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಸಂಬಂಧ ರಾಜ್ಯ ಸರ್ಕಾರ ಸಲ್ಲಿಸಿರುವ ಮೇಲ್ಮನವಿ ಅರ್ಜಿ ಸೋಮವಾರ ಸುಪ್ರೀಂಕೋರ್ಟ್‌ನಲ್ಲಿ ವಿಚಾರಣೆಗೆ ಬರಲಿದೆ ಎಂದು ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಡಬ್ಲ್ಯೂಆರ್‌ಸಿ ಆದೇಶವನ್ನು ಉಲ್ಲಂಘಿಸಿ, ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದರೆ, ಅರ್ಜಿ ತಿರಸ್ಕೃತಗೊಳ್ಳುವ ಸಾಧ್ಯತೆ ಇದೆ. ಹೀಗಾಗಿ ಕಾನೂನು ತಜ್ಞರ ಸಲಹೆಯಂತೆ ಸೋಮವಾರದವರೆಗೆ ತಮಿಳುನಾಡಿಗೆ ನೀರು ಹರಿಸುವುದು ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ. ಪ್ರಸ್ತುತ ರೈತರ ಬೆಳೆಗಳಿಗೆ ಕಟ್ಟು ನೀರು ಪದ್ಧತಿಯಲ್ಲಿ ನೀರು ಪೂರೈಸಲಾಗುತ್ತಿದೆ. ಮುಂದಿನ ಡಿಸೆಂಬರ್‌ನಿಂದ ಜೂನ್‌ವರೆಗೆ ಕುಡಿಯುವ ನೀರಿನ ಅಗತ್ಯಕ್ಕೆ ತಕ್ಕಂತೆ ಕಾವೇರಿ ಜಲಾನಯನ ಪ್ರದೇಶದ ನಾಲ್ಕು ಪ್ರಮುಖ ಜಲಾಶಯಗಳಲ್ಲಿ ನೀರು ಸಂಗ್ರಹಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಮೇಕೆದಾಟು ಯೋಜನೆ ಸಂಬಂಧ ಈಗಾಗಲೇ ಕೇಂದ್ರ ಜಲಶಕ್ತಿ ಸಚಿವರೊಂದಿಗೆ ಸಮಾಲೋಚನೆ ನಡೆಸಲಾಗಿದ್ದು, ಶೀಘ್ರವೇ ಅನುಮೋದನೆ ದೊರೆಯುವ ವಿಶ್ವಾಸವಿದೆ ಎಂದು ತಿಳಿಸಿದ್ದಾರೆ.

**<><*<>*<>*><>**

ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯ ಸಿದ್ದರಾಮಯ್ಯ ಅವರು, ನವದೆಹಲಿಯಲ್ಲಿಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿದ್ದಾರೆ.  ಈ ವೇಳೆ, ಸಚಿವ ಸಂಪುಟವನ್ನು ಆದಷ್ಟು ಶೀಘ್ರವೇ ಭರ್ತಿ ಮಾಡುವಂತೆ ವರಿಷ್ಠರಿಗೆ ಮನವಿ ಮಾಡಿದ್ದಾರೆ. ರಾಜ್ಯದಲ್ಲಿ ಜಾತಿಗಣತಿ ವರದಿಯನ್ನು ಶೀಘ್ರವೇ ಜಾರಿಗೆ ತರುವಂತೆ ಒತ್ತಾಯಿಸಿದ್ದಾರೆ.  ರಾಹುಲ್ ಗಾಂಧಿ ಭೇಟಿ ಬಳಿಕ, ಸಿದ್ದರಾಮಯ್ಯ ಅವರು, ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರನ್ನು ಭೇಟಿಯಾಗಿ ರಾಜ್ಯದ ರಾಜಕೀಯ ಪರಿಸ್ಥಿತಿ ಹಾಗೂ ಮುಂಬರುವ ಚುನಾವಣೆಗಳಿಗೆ ಪಕ್ಷದ ಸಿದ್ಧತೆಗಳ ಕುರಿತು ಚರ್ಚಿಸಿದ್ದಾರೆ.

**<><*<>*<>*><>**

ರಾಮನಗರದಲ್ಲಿ ಇತ್ತೀಚೆಗೆ ಪತ್ತೆಯಾದ ನಕಲಿ ಔಷಧ ಜಾಲದ ಕುರಿತು ತನಿಖೆ ನಡೆಸುತ್ತಿರುವ ಎಸ್ಐಟಿ ತಂಡ ದೇಶಾದ್ಯಂತ ಹತ್ತು ಸ್ಥಳಗಳಲ್ಲಿ ದಾಳಿ ನಡೆಸಿದೆ. ಹರಿಯಾಣ, ಮಹಾರಾಷ್ಟ್ರ, ತಮಿಳುನಾಡು, ಹಿಮಾಚಲಪ್ರದೇಶ, ತೆಲಂಗಾಣ ಹಾಗೂ ರಾಜ್ಯದ ಹಲವೆಡೆ ದಾಳಿ ನಡೆದಿದೆ. ನಕಲಿ ಔಷಧ ತನಿಖೆಯ ಭಾಗವಾಗಿ ಎಸ್ಐಟಿ ಮತ್ತು ಔಷಧ ನಿಯಂತ್ರಣ ಇಲಾಖೆ ಜಂಟಿಯಾಗಿ ಈ ದಾಳಿ ನಡೆಸಿದೆ. ನಕಲಿ ಔಷಧ ಜಾಲಕ್ಕೆ ಸಂಬಂಧಿಸಿದಂತೆ ಅಂತಾರಾಷ್ಟ್ರೀಯ ಸಂಪರ್ಕಗಳು ಮತ್ತು ನಕಲಿ ಲೇಬಲ್‌ಗಳ ಮೂಲದ ಬಗ್ಗೆಯೂ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ.

**<><*<>*<>*><>**

ಬೆಂಗಳೂರಿನಲ್ಲಿ ರಸ್ತೆ, ಗುಂಡಿಗಳನ್ನು ಜೆಟ್ ಪ್ಯಾಚರ್ ಯಂತ್ರ ಬಳಸಿ, ವೈಜ್ಞಾನಿಕ ವಿಧಾನದಲ್ಲಿ ಮುಚ್ಚುವ ಅಭಿಯಾನಕ್ಕೆ ಸಚಿವ ಕೃಷ್ಣ ಬೈರೇಗೌಡ ಇಂದು ಚಾಲನೆ ನೀಡಿದರು.  ಬಳಿಕ ಮಾತನಾಡಿದ ಅವರು, ಸಣ್ಣ ಪ್ರಮಾಣದ ರಸ್ತೆ ಗುಂಡಿಗಳನ್ನು ಮುಚ್ಚಲು ಈ ತಂತ್ರಜ್ಞಾನ ಸೂಕ್ತ ಎಂದು ತಿಳಿಸಿದ್ದಾರೆ. ಭವಿಷ್ಯದಲ್ಲಿ ಪರಿಸ್ಥಿತಿಗೆ ತಕ್ಕಂತೆ ವಿವಿಧ ತಂತ್ರಜ್ಞಾನಗಳ ಬಳಕೆಗೆ ಇಂದು ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿದೆ. ಈ ಜೆಟ್ ಪ್ಯಾಚರ್ ಬಳಸಿ, ಆಳವಾದ ಗುಂಡಿಗಳನ್ನು ಮುಚ್ಚಲು ಸಾಧ್ಯವಿಲ್ಲ, ಕೇವಲ ಎರಡು - ಮೂರು ಇಂಚಿನ ಗುಂಡಿಗಳನ್ನು ಮುಚ್ಚಲು ಇದು ಸಹಾಯಕವಾಗಿದೆ ಎಂದು ತಿಳಿಸಿದ್ದಾರೆ.  ಪ್ರಾಯೋಗಿಕವಾಗಿ ಗುಂಡಿ ಮುಚ್ಚುವ ಕಾರ್ಯ ಆರಂಭಿಸಲಾಗಿದ್ದು, ಇದು ಯಶಸ್ವಿಯಾದರೆ ಶೀಘ್ರದಲ್ಲೇ ಎಲ್ಲಾ ಪಾಲಿಕೆಯ ವ್ಯಾಪ್ತಿಯಲ್ಲೂ ಈ ಯಂತ್ರ ಬಳಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<>*<>*><>**

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಹಿರಿಯ ನಾಗರಿಕರು, ವಿಶೇಷಚೇತನರು ಮತ್ತು ಅನಿವಾಸಿ ಮತದಾರರ ಪರವಾಗಿ ಅವರ ಕುಟುಂಬದ ವಯಸ್ಕ ಸದಸ್ಯರು ಹಾಜರಾಗಲು ಅವಕಾಶ ನೀಡುವಂತೆ ರಾಜ್ಯ ಮುಖ್ಯ ಚುನಾವಣಾಧಿಕಾರಿ, ಚುನಾವಣಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯದ ೨೨೪ ವಿಧಾನಸಭಾ ಕ್ಷೇತ್ರಗಳ ಎಲ್ಲಾ ಮತದಾರರ ನೋಂದಣಿ ಅಧಿಕಾರಿಗಳಿಗೆ ಈ ಸೂಚನೆ ರವಾನಿಸಿದ್ದಾರೆ. ಈ ವರ್ಷದ ಮೇ ೧೪ ರಂದು ಹೊರಡಿಸಿದ ಪತ್ರದ ಆಧಾರದ ಮೇಲೆ ಈ ನಿರ್ದೇಶನ ನೀಡಿದ್ದಾರೆ.

**<><*<>*<>*><>**

ಭಾರತೀಯ ಸಸ್ಯತಳಿ ಸಂಪನ್ಮೂಲಗಳ ಸಂಸ್ಥೆ, ನವದೆಹಲಿ ಹಾಗೂ ಭಾರತೀಯ ತೋಟಗಾರಿಕಾ ಸಂಸ್ಥೆ, ಬೆಂಗಳೂರು ಸಹಯೋಗದಲ್ಲಿ ಇದೇ ೧೬ ರಿಂದ ೧೯ರವರೆಗೆ ಬೆಂಗಳೂರಿನ ಹೆಸರಘಟ್ಟದಲ್ಲಿ ಭಾರತದ ಸಸ್ಯ ಅನುವಂಶಿಕ ಸಂಪನ್ಮೂಲಗಳ ಸದ್ಬಳಕೆ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ವಿಚಾರ ಸಂಕಿರಣದಲ್ಲಿ ಪ್ರಮುಖವಾಗಿ ಪರ್ಯಾಯ ದ್ವೀಪ, ಭಾರತದ ಅನುವಂಶಿಕ ಪರಂಪರೆಯ ಸಂರಕ್ಷಣೆ, ಸುಸ್ಥಿರ ಬಳಕೆಗಾಗಿ ಅನುವಂಶಿಕ ವೈವಿಧ್ಯತೆಯ ವೈಜ್ಞಾನಿಕ ಅನಾವರಣ ಸೇರಿದಂತೆ ಐದು ವಿಷಗಳ ಕುರಿತಂತೆ ಚರ್ಚೆ ನಡೆಯಲಿದೆ.

**<><*<>*<>*><>**

ಅರಣ್ಯ ವನ್ಯಜೀವಿ ಸಂಪತ್ತನ್ನು ಸಂರಕ್ಷಿಸಲು ಪ್ರಾಣತ್ಯಾಗ ಮಾಡಿದ ಅರಣ್ಯ ಇಲಾಖೆಯ ಹುತಾತ್ಮರಿಗೆ ಶ್ರದ್ಧಾಂಜಲಿ ಅರ್ಪಿಸುವ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯನ್ನು ಇಂದು ಬೆಳಗಾವಿಯಲ್ಲಿ ಅರಣ್ಯ ಇಲಾಖೆಯ ವತಿಯಿಂದ ಆಯೋಜಿಸಲಾಗಿತ್ತು. ನ್ಯಾಯಾಂಗ ಇಲಾಖೆ ಹಾಗೂ ಅರಣ್ಯ ಇಲಾಖೆಗೆ ಬಹಳ ಹತ್ತಿರದ ಸಂಬಂಧವಿದ್ದು, ಅರಣ್ಯ ಸಂರಕ್ಷಣೆ ಮಾಡುವುದು ಸರ್ವೋಚ್ಚ ನ್ಯಾಯಾಲಯ ಹಾಗೂ ನ್ಯಾಯಾಂಗ ಇಲಾಖೆಯ ಪ್ರಮುಖ ಉದ್ದೇಶವಾಗಿದೆ ಎಂದು ಧಾರವಾಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್. ವಿ. ವಿಜಯ್ ತಿಳಿಸಿದ್ದಾರೆ.

**<><*<>*<>*><>**

ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್ - ೨೦೨೬ ಕಾರ್ಯಕ್ರಮದ ಅಂಗವಾಗಿ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ವತಿಯಿಂದ 'ಮೇರಾ ಯುವ ಭಾರತ್' ಮೂಲಕ 'ವಿಕಸಿತ ಭಾರತ ರಸಪ್ರಶ್ನೆ ಸ್ಪರ್ಧೆ' ಆಯೋಜಿಸಲಾಗಿದೆ ಎಂದು ಮೈ ಭಾರತ್ ಹಾವೇರಿ ಜಿಲ್ಲಾ

ಉಸ್ತುವಾರಿ ಅಧಿಕಾರಿ ಬಿ.ಶರಣ್ಯ ಹೇಳಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರೊಂದಿಗೆ ಮಾತನಾಡಿದ ಅವರು, ೨೦೪೭ರ ವೇಳೆಗೆ ಭಾರತವನ್ನು ವಿಕಸಿತ ಭಾರತ ಮಾಡುವ ದಿಸೆಯಲ್ಲಿ ಯುವಜನರ ಜ್ಞಾನ, ನಾಯಕತ್ವ ಗುಣ, ಚಿಂತನಾ ಸಾಮರ್ಥ್ಯ ಹಾಗೂ ದೇಶದ ಅಭಿವೃದ್ಧಿಯ ಕುರಿತು ಅರಿವು ಹೆಚ್ಚಿಸುವ ಉದ್ದೇಶದಿಂದ ಈ ಈ ರಸಪ್ರಶ್ನೆ ಆಯೋಜಿಸಲಾಗಿದೆ. ಹಾವೇರಿ ಜಿಲ್ಲೆಯ ೧೫ ರಿಂದ ೨೯ ವರ್ಷ ವಯಸ್ಸಿನ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದು ಎಂದು ಮಾಹಿತಿ ನೀಡಿದ್ದಾರೆ.

**<><*<>*<>*><>**

**ಸಂಕ್ಷಿಪ್ತ ಸುದ್ದಿ**

೧. ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಿಗದಿಪಡಿಸಿರುವ ಸಹಾಯಕ ತೋಟಗಾರಿಕೆ ಅಧಿಕಾರಿ ಹಾಗೂ ಸಹಾಯಕ ತೋಟಗಾರಿಕೆ ನಿರ್ದೇಶಕ ಹುದ್ದೆಗಳ ನೇಮಕಾತಿ ಪರೀಕ್ಷಾ ದಿನಾಂಕಗಳನ್ನು ಮುಂದೂಡುವಂತೆ ಸಂಸದ ಗೋವಿಂದ ಎಂ. ಕಾರಜೋಳ ಮುಖ್ಯಮಂತ್ರಿಗೆ ಪತ್ರದ ಮೂಲಕ ಮನವಿ ಮಾಡಿದ್ದಾರೆ.

೨. ಅಲ್ಪಸಂಖ್ಯಾತರ ಕಲ್ಯಾಣ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸುವಲ್ಲಿ ಅಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಕೋಲಾರ ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ ನಿರ್ದೇಶನ ನೀಡಿದ್ದಾರೆ.

೩. ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ೭೯ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಇದೇ ೧೭ ರಂದು ಆಯೋಜಿಸಲಾಗಿದೆ. ರಾಷ್ಟ್ರ ಧ್ವಜಾರೋಹಣ, ಕಲ್ಯಾಣ ಕರ್ನಾಟಕ ಅಭಿವೃದ್ಧಿಯ ಕುರಿತು ಉಪನ್ಯಾಸ, ಹೈದ್ರಾಬಾದ್ ಕರ್ನಾಟಕ ವಿಮೋಚನೆಗೆ ಹೋರಾಟ ನಡೆಸಿದವರಿಗೆ ಗೌರವ ಸನ್ಮಾನ ನೆರವೇರಲಿದೆ ಎಂದು ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**